# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 43 (89)
ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ
(ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 12.09.2022
ಉತ್ತರಿಸಬೇಕಾದ ಸಚಿವರು : ಜೀವಿಪರಿಸ್ಥಿತಿ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರಮ ಸಂಖ್ಯೆ: | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸುಮಾರು 10 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಪರಿಸರ ಅಧಿಕಾರಿಯನ್ನು ಗದಗ ಜಿಲ್ಲೆಗೆ ವರ್ಗಾಯಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:ಬಂದಿದಲ್ಲಿ ಸದರಿಯವರನ್ನು ಇದುವರೆಗೂ ಕರ್ತವ್ಯದಿಂದ ಬಿಡುಗಡೆಗೊಳಿಸದಿರಲು ಕಾರಣಗಳೇನು? | ಬಂದಿದೆ.<br><br>ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಛೇರಿ, ಮಂಗಳೂರು ಇಲ್ಲಿ ಹಾಲಿ ಇರುವ ಪರಿಸರ ಅಧಿಕಾರಿಯವರು 2 ವರ್ಷ 8 ತಿಂಗಳಿಂದ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಆಡಳಿತಾತ್ಮಕ ಹಿತದೃಷ್ಟಿಯಿಂದ ಸದರಿಯವರನ್ನು ಸದರಿ ಹುದ್ದೆಯಲ್ಲಿ ಮುಂದುವರೆಸಲಾಗಿದೆ. |
| ಆ) | ಸದರಿಯವರ ವಿರುದ್ಧ ಸಾರ್ವಜನಿಕ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:ಹಾಗಿದ್ದಲ್ಲಿ ಸರ್ಕಾರದ ಆದೇಶವನ್ನು ಉಲ್ಲಂಘಿಸಿ ಸದರಿ ಹುದ್ದೆಯಲ್ಲಿ ಮುಂದುವರೆಸಲು ಕಾರಣಗಳೇನು: | ಸದರಿ ಪರಿಸರ ಅಧಿಕಾರಿಯ ವಿರುದ್ಧ ಯಾವುದೇ ರೀತಿಯ ಸಾರ್ವಜನಿಕ ದೂರುಗಳು ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ.<br><br>ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಛೇರಿ, ಮಂಗಳೂರು ಇಲ್ಲಿ ಹಾಲಿ ಇರುವ ಪರಿಸರ ಅಧಿಕಾರಿಯವರು 2 ವರ್ಷ 8 ತಿಂಗಳಿಂದ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಆಡಳಿತಾತ್ಮಕ ಹಿತದೃಷ್ಟಿಯಿಂದ ಸದರಿಯವರನ್ನು ಸದರಿ ಹುದ್ದೆಯಲ್ಲಿ ಮುಂದುವರೆಸಲಾಗಿದೆ. |
| ಇ) | ದೂರುಗಳ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು:ಯಾವ ಕಾಲ ಮಿತಿಯಲ್ಲಿ ಸದರಿಯವರನ್ನು ವರ್ಗಾವಣೆಗೊಂಡ ಜಾಗಕ್ಕೆ ಬಿಡುಗಡೆಗೊಳಿಸಲಾಗುವುದು? | ಉದ್ಭವಿಸುವುದಿಲ್ಲ |

ಸಂಖ್ಯೆ: ಅಪಜೀ 246 ಇಪಿಸಿ 2022

(ಆನಂದ್ ಸಿಂಗ್)
ಜೀವಿಪರಿಸ್ಥಿತಿ ಮತ್ತು ಪರಿಸರ ಹಾಗೂ
ಪ್ರವಾಸೋದ್ಯಮ ಸಚಿವರು